# ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ

**ವಿಷಯ:**

ಮಾರ್ಚ್ 2023ರಲ್ಲಿ ನಡೆದ ದ್ವಿತೀಯ ಪಿಯುಸಿ ಪ್ರಾಯೋಗಿಕ, ವಾರ್ಷಿಕ, ಪೂರಕ ಪರೀಕ್ಷೆಗಳು ಹಾಗೂ ಮೌಲ್ಯಮಾಪನ ಮತ್ತು ಪರೀಕ್ಷಾ ಕಾರ್ಯಗಳಲ್ಲಿ ಕಾರ್ಯನಿರ್ವಹಿಸಿದ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರಿಗೆ ಇದುವರೆವಿಗೂ ದಿನಭತ್ಯೆ, ಪ್ರಯಾಣಭತ್ಯೆ, ಮೌಲ್ಯಮಾಪನ ಸಂಭಾವನೆ ಹಾಗೂ ಇತರೆ ಭತ್ಯೆಗಳನ್ನು ಪಾವತಿಸದೆ ಇರುವುದು ಶೋಚನೀಯ ಸಂಗತಿ.

ವಿದ್ಯಾರ್ಥಿಗಳ ಶುಲ್ಕದಿಂದಲೇ ಸದರಿ ವೆಚ್ಚಗಳನ್ನು ಭರಿಸಲಾಗುತ್ತಿದೆ. ಸದರಿ ಕಾರ್ಯಕ್ಕೆ ಹಣಕಾಸಿನ ತೊಂದರೆ ಇರುವುದಿಲ್ಲ. ಪ್ರತಿ ವರ್ಷ ನಿಗದಿತ ಸಮಯದಲ್ಲಿ ಪರೀಕ್ಷೆ ಮೌಲ್ಯಮಾಪನ ಕಾರ್ಯಗಳು ನಡೆಸುವುದು, ಭತ್ಯೆಗಳನ್ನು ನೀಡುವುದು ಕಡ್ಡಾಯವಾಗಿದ್ದರೂ, ಭತ್ಯೆಗಳನ್ನು ಪಾವತಿಸುವಲ್ಲಿ ತೀರಾ ವಿಳಂಬ ಉಂಟು ಮಾಡುತ್ತಿರುವ ಅಧಿಕಾರಿಗಳ ನಡವಳಿಕೆಯನ್ನು ಖಂಡಿಸುತ್ತೇನೆ. ಮೌಲ್ಯಮಾಪನ ಸಂಭಾವನೆ ಹಾಗೂ ಭತ್ಯೆ ಪಾವತಿಸುವಲ್ಲಿ ವಿಳಂಬ ಮಾಡುತ್ತಿರುವ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕೂಡಲೇ ಕ್ರಮ ಕೈಗೊಳ್ಳಬೇಕು. ಬಾಕಿ ಇರುವ ಸಂಭಾವನೆ ಮತ್ತು ಇತರೆ ಭತ್ಯೆಗಳನ್ನು ಕೂಡಲೇ ಬಿಡುಗಡೆಗೊಳಿಸುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರನ್ನು ಕೋರುತ್ತೇನೆ.

**ಉತ್ತರ:**

2023ನೇ ಸಾಲಿನ ದ್ವಿತೀಯ ಪದವಿ ಪೂರ್ವ ಪರೀಕ್ಷಾ ಕಾರ್ಯದಲ್ಲಿ ಭಾಗವಹಿಸಿದ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರಿಗೆ ದಿನಭತ್ಯೆ, ಪ್ರಯಾಣ ಭತ್ಯೆ, ಮೌಲ್ಯಮಾಪನ ಭತ್ಯೆ, ಪದವಿ ಪೂರ್ವ ಪರೀಕ್ಷಾ ವೆಚ್ಚಕ್ಕಾಗಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಸಂಭಾವನೆ ಹಾಗೂ ಇತರೆ ಭತ್ಯೆಗಳನ್ನು ಪಾವತಿಸಲು 2023-24ನೇ ಸಾಲಿಗೆ ಲೆಕ್ಕ ಶೀರ್ಷಿಕೆ:2202-02-

330 A
SL No. 13
19/07/2023

001-0-07 ಯ ಉಪಶೀರ್ಷಿಕೆ:015 (ಪೂರಕ ವೆಚ್ಚಗಳು) ಅಡಿಯಲ್ಲಿ ಒದಗಿಸಲಾದ ರೂ.16.00 ಕೋಟಿಗಳು ಹಾಗೂ ಉಪಶೀರ್ಷಿಕೆ:041 (ಪ್ರಯಾಣ ಭತ್ಯೆ) ಅಡಿಯಲ್ಲಿ ಒದಗಿಸಲಾದ ರೂ.15.00 ಕೋಟಿಗಳು ಒಳಗೊಂಡಂತೆ ಒಟ್ಟಾರೆಯಾಗಿ ಒದಗಿಸಲಾದ ರೂ.31.00 ಕೋಟಿಗಳ ಪೈಕಿ ನಾಲ್ಕು ತಿಂಗಳಿಗೆ ಪಡೆದ ಲೇಖಾನುದಾನದಂತೆ ರೂ.11.66 ಕೋಟಿಗಳ ಅನುದಾನವನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ. ಸದರಿ ಮೊತ್ತದಲ್ಲಿ 7507 ಮೌಲ್ಯಮಾಪಕರಿಗೆ ಸಂಭಾವನೆ ಹಾಗೂ 6635 ಮೌಲ್ಯಮಾಪಕರಿಗೆ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಈಗಾಗಲೇ ಪಾವತಿಸಲಾಗಿದೆ. ಉಳಿಕೆ ಸಿಬ್ಬಂದಿಗಳಿಗೆ ಸದರಿ ಭತ್ಯೆಗಳನ್ನು ಪಾವತಿಸುವ ಸಂಬಂಧ ಹೆಚ್ಚುವರಿ ಅನುದಾನ ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಪ್ರಸ್ತುತ ನಡೆಯುತ್ತಿರುವ ಅಧಿವೇಶನದಲ್ಲಿ ಉಳಿಕೆ ಸಾಲಿನ ಲೇಖಾನುದಾನಕ್ಕೆ ಅನುಮೋದನೆ ದೊರೆತ ಕೂಡಲೇ ಅನುದಾನ ಬಿಡುಗಡೆಗೊಳಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು.

**ಸಂಖ್ಯೆ: ಇಪಿ 108 ಯೋಯೋಕ 2023**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು